# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/335/19–20

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 30–05–2020

**ಸುತ್ತೋಲೆ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ನಾಗರೀಕ ಸೇವಾ ಕೇಂದ್ರಗಳಲ್ಲಿ ವಲಸೆ ಕಾರ್ಮಿಕರ ಸಹಾಯ ಕೇಂದ್ರವನ್ನು ತೆರೆದು (Migrant Help Desk)

---------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಬೆಂಗಳೂರು ನಗರದಲ್ಲಿ COVID-19, Corona Virus ಸೋಂಕು ರೋಗವು ಹರಡದಂತೆ ತಡೆಯಲು ರಾಜ್ಯ ಸರ್ಕಾರವು ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಹಲವಾರು ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಪ್ರಸ್ತುತ ಲಾಕ್‌ಡೌನ್ ಸಡಿಲಗೊಳಿಸಲಾಗಿರುವುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಲಸೆ ಕಾರ್ಮಿಕರುಗಳು ತಮ್ಮ ಸ್ವಂತ ಸ್ಥಳ/ಊರುಗಳಿಗೆ ತೆರಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪಾಲಿಕೆ ವ್ಯಾಪ್ತಿಯಲ್ಲಿರುವ ವಲಸೆ ಕಾರ್ಮಿಕರುಗಳು ಕರ್ನಾಟಕ ಸರ್ಕಾರದ “ಸೇವಾ ಸಿಂಧು” ಪೋರ್ಟಲ್ ಅಡಿಯಲ್ಲಿ ನೋಂದಣಿ ಮಾಡುವುದು ಕಡ್ಡಾಯವಾಗಿರುತ್ತದೆ.

ಆದರೆ, ಈ ರೀತಿ ಬೆಂಗಳೂರು ನಗರವನ್ನು ತ್ಯಜಿಸುತ್ತಿರುವ ವಲಸೆ ಕಾರ್ಮಿಕರುಗಳು ಯಾವುದೇ ಮಾಹಿತಿಯನ್ನು ನೀಡದೆ, ತಮ್ಮ ಸ್ವಂತ ಸ್ಥಳ/ಊರುಗಳಿಗೆ ತೆರಳುತ್ತಿರುವುದರಿಂದ ಈ ಬಗ್ಗೆ ಪಾಲಿಕೆಗೆ ಯಾವುದೇ ಮಾಹಿತಿ ಇಲ್ಲದಂತಾಗುತ್ತಿರುವುದರಿಂದ, ಇನ್ನು ಮುಂದೆ ಕಡ್ಡಾಯವಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ವಲಸೆ ಕಾರ್ಮಿಕರುಗಳು ತಮ್ಮ ಸ್ವಂತ ಸ್ಥಳ/ಊರುಗಳಿಗೆ ತೆರಳುವ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ “ಸೇವಾ ಸಿಂಧು” ಪೋರ್ಟಲ್ ಅಡಿಯಲ್ಲಿ ನೋಂದಣಿ ಮಾಡಿಸಲು ಸೂಚಿಸಿದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಎಲ್ಲಾ ನಾಗರೀಕ ಸೇವಾ ಕೇಂದ್ರಗಳಲ್ಲಿ ವಲಸೆ ಕಾರ್ಮಿಕರ ಸಹಾಯ ಕೇಂದ್ರವನ್ನು ತೆರೆದು (Migrant Help Desk) ಕನ್ನಡ, ಹಿಂದಿ, ಇಂಗ್ಲಿಷ್ ಭಾಷೆಯೂ ಒಳಗೊಂಡಂತೆ ಬಹುಭಾಷೆಯಲ್ಲಿ ನಾಮಫಲಕಗಳನ್ನು ಅಳವಡಿಸಿ, ಸಹಾಯ ಕೇಂದ್ರಕ್ಕೆ ಪ್ರತ್ಯೇಕ ನಿರ್ಧಿಷ್ಟ ಅಧಿಕಾರಿಯೊಬ್ಬರನ್ನು ನೇಮಿಸಿ, ನೋಂದಣಿ ಮಾಡಿಸಲು ಕಛೇರಿಗೆ ಬರುವ ವಲಸೆ ಕಾರ್ಮಿಕರಿಗೆ ಸಲಹೆ ಸೂಚನೆಗಳನ್ನು ನೀಡಿ, ನೊಂದಣಿ ಮಾಡಿಸಿಕೊಡಲು ಅಗತ್ಯ ಕ್ರಮ ಕೈಗೊಳ್ಳುವುದು ಹಾಗೂ ಎಲ್ಲಾ ಕಾರ್ಯಗಳ ಮೇಲ್ವಿಚಾರಣೆಯನ್ನು ಯಾವುದೇ ನ್ಯೂನ್ಯತೆಗಳುಂಟಾಗದಂತೆ ಆಯಾ ನಾಗರೀಕ ಸೇವಾ ಕೇಂದ್ರದ ಸಹಾಯಕ ಕಂದಾಯ ಅಧಿಕಾರಿಗಳು ದಿನಾಂಕ: 01–06–2020ರಿಂದ ಪ್ರಾರಂಭಿಸಿ ನಿರ್ವಹಿಸಲು ಆದೇಶಿಸಿದೆ.

(ಸಹಿ)
ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಪೂಜ್ಯ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಉಪ ಮಹಾಪೌರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯ ವಿಶೇಷ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.